**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ : **145**

ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ
(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 14-02-2024

| | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಏಪ್ರಿಲ್ 2019ಕ್ಕಿಂತ ಮೊದಲು ನೋಂದಣಿ ಆಗಿರುವ ವಾಹನಗಳ (ಹಳೆಯ ಅಥವಾ ಅಸ್ತಿತ್ವದಲ್ಲಿರುವ ವಾಹನಗಳು) ಸಂಖ್ಯೆ ಎಷ್ಟು; ಹಾಗೂ ಈವರೆವಿಗೂ ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ (ಹೆಚ್ ಎಸ್ ಆರ್ ಪಿ) ನಂಬರ್ ಪ್ಲೇಟ್ ಅಳವಡಿಸಿಕೊಂಡಿರುವ ವಾಹನಗಳ ಸಂಖ್ಯೆ ಮತ್ತು ಇದರ ಶೇಕಡವಾರು ಪ್ರಮಾಣ ಎಷ್ಟು; (ಸಂಪೂರ್ಣ ವಿವರ ನೀಡುವುದು). | ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯದ ಅಧಿಸೂಚನೆ ಸಂಖ್ಯೆ.G.S.R.1162 (ಇ) ದಿನಾಂಕ:04-12-2018 ರನ್ವಯ ದಿನಾಂಕ:01-04-2019 ರ ನಂತರ ನೋಂದಣಿಯಾದ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು ಅಳವಡಿಸಲಾಗುತ್ತಿದೆ.<br><br>ಅತಿ ಸುರಕ್ಷತಾ ನೋಂದಣಿ ಫಲಕಗಳ ಯೋಜನೆಯನ್ನು ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದ ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ. ಇದರಿಂದಾಗಿ, ವಾಹನಗಳನ್ನು ಬಳಸಿಕೊಂಡು ಎಸಗುವ ಅಪರಾಧಗಳನ್ನು ತಡೆಗಟ್ಟುವುದು ಮತ್ತು ರಸ್ತೆಯ ಮೇಲೆ ಸಂಚರಿಸುವ ಎಲ್ಲಾ ವಾಹನಗಳನ್ನು ಗುರುತಿಸಲು ಸಾಧ್ಯವಾಗುತ್ತದೆ. ಅಲ್ಲದೆ, ನೋಂದಣಿ ಫಲಕಗಳನ್ನು ವಿರೂಪಗೊಳಿಸುವ ಮತ್ತು ನಕಲಿ ನೋಂದಣಿ ಫಲಕಗಳನ್ನು ನಿಯಂತ್ರಿಸಲು ಸಹಾಯಕವಾಗುತ್ತದೆ. ಪ್ರವರ್ತನ ಮತ್ತು ಭದ್ರತೆ ದೃಷ್ಟಿಯಿಂದ ಅತಿ ಸುರಕ್ಷಿತ ನೋಂದಣಿ ಫಲಕಗಳು ಪ್ರಮುಖ ಪಾತ್ರ ವಹಿಸುತ್ತವೆ. ಕೇಂದ್ರ ಮೋಟಾರು ವಾಹನ ನಿಯಮಗಳು 1989ರ ನಿಯಮ 50 ರಲ್ಲಿ ನಿಗದಿಪಡಿಸಿರುವಂತೆ ವಾಹನಗಳ ಮೇಲೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (HSRP) ಅಳವಡಿಸಲು ಸೂಚಿಸಲಾಗಿರುತ್ತದೆ.<br><br>ನೋಂದಣಿ ಫಲಕವು ಅಲ್ಯೂಮಿನಿಯಂನಿಂದ ನಿರ್ಮಿತವಾದ "ಹೈ ಸೆಕ್ಯುರಿಟಿ ರಿಜಿಸ್ಟ್ರೇಶನ್ ಪ್ಲೇಟ್" ಆಗಿದ್ದು, ಮರುಬಳಕೆ ಮಾಡಲಾಗದ ಎರಡು ಲಾಕ್‌ಗಳನ್ನು ಬಳಸಿಕೊಂಡು ವಾಹನದ ಮೇಲೆ ಸ್ಥಿರವಾಗಿ ಅಳವಡಿಸಲಾಗುತ್ತದೆ. ನಕಲಿನಿಂದ ರಕ್ಷಿಸಲು 20 ಎಂಎಂ x 20 ಎಂಎಂ ಗಾತ್ರದ ಚಕ್ರದ ಕ್ರೋಮಿಯಂ ಆಧಾರಿತ ಹೊಲೊಗ್ರಾಮ್ ಅನ್ನು ಮುಂಭಾಗ ಮತ್ತು ಹಿಂಭಾಗದ ಎರಡೂ ಪ್ಲೇಟ್‌ಗಳ ಮೇಲಿನ ಎಡ ಮೂಲೆಯಲ್ಲಿ ಬಿಸಿ ಸ್ಟಾಂಪಿಂಗ್ ಮೂಲಕ ಅಳವಡಿಸಲಾಗುತ್ತದೆ.<br><br>ಕೇಂದ್ರ ಸರ್ಕಾರದ ಆದೇಶದನ್ವಯ ಎಲ್ಲಾ ರಾಜ್ಯಗಳಲ್ಲಿಯೂ ಅತಿ ಸುರಕ್ಷತಾ ನೋಂದಣಿ ಫಲಕಗಳನ್ನು ಅಳವಡಿಸಲಾಗುತ್ತಿದ್ದು, ಅದೇ ರೀತಿಯಾಗಿ ರಾಜ್ಯದಲ್ಲಿಯೂ ಸಹ ಫಲಕಗಳನ್ನು ಅಳವಡಿಸಲು ಆದೇಶಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ಏಪ್ರಿಲ್ 2019ಕ್ಕಿಂತ ಮೊದಲು ಅಂದಾಜು 2.45 ಕೋಟಿ ವಾಹನಗಳು ನೋಂದಣಿಯಾಗಿದ್ದು, ಸುಮಾರು 2 ಕೋಟಿ ವಾಹನಗಳು ಅಸ್ತಿತ್ವದಲ್ಲಿವೆ.<br><br>ಇವುಗಳ ಪೈಕಿ, ದಿನಾಂಕ:18-08-2023 ರಿಂದ 12-02-2024 ರವರೆಗೆ ಒಟ್ಟು 18,32,787 ವಾಹನಗಳಿಗೆ ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಲಾಗಿದೆ.<br><br>ಮೇಲಿನ ಅಂಕಿ-ಅಂಶಗಳ ಪ್ರಕಾರ ಒಟ್ಟಾರೆ ಶೇ.9.16% ಪ್ರಮಾಣದ ವಾಹನಗಳಿಗೆ ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಲಾಗಿದೆ. |

| | | |
|---|---|---|
| ಆ. | ವಾಹನಗಳಿಗೆ ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಿಕೊಳ್ಳಲು ನೀಡಿದ್ದ ಗಡುವು 2024ರ ಫೆಬ್ರುವರಿ 17ಕ್ಕೆ ಮುಕ್ತಾಯಗೊಳ್ಳಲಿರುವುದರಿಂದ ಸರ್ಕಾರ ಮತ್ತೊಮ್ಮೆ ಗಡುವನ್ನು ವಿಸ್ತರಿಸಲಿದೆಯೇ; | ಪರಿಶೀಲನೆಯಲ್ಲಿದೆ. |
| ಇ. | ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಿಕೊಳ್ಳದ ವಾಹನಗಳನ್ನು ಪ್ರತಿ ಬಾರಿ ಪೊಲೀಸರು ಹಿಡಿದಾಗಲೂ ವಿಧಿಸಲಾಗುವ ದಂಡದ ಮೊತ್ತ ಎಷ್ಟು; | ನಿಗದಿತ ದಿನಾಂಕದೊಳಗೆ **ಹೆಚ್.ಎಸ್.ಆರ್.ಪಿ.** ಅಳವಡಿಸದಿದ್ದಲ್ಲಿ, ಸರ್ಕಾರಿ ಅಧಿಸೂಚನೆ ಸಂಖ್ಯೆ: **ಟಿಡಿ 250 ಟಿಡಿಒ** 2019, ದಿನಾಂಕ: 21-09-2019 ರ ಪ್ರಕಾರ ಕಲಂ 177ರಡಿ ಮೊದಲನೇ ಅಪರಾಧಕ್ಕೆ ರೂ.500/- ಹಾಗೂ 2ನೇ ಮತ್ತು ನಂತರದ ಅಪರಾಧಗಳಿಗೆ ರೂ.1000/- ದಂತೆ ಹಾಗೂ ಕಾಲಕಾಲಕ್ಕೆ ಹೊರಡಿಸಲಾಗುವ ಸರ್ಕಾರದ ಆದೇಶಗಳನ್ವಯ ದಂಡವನ್ನು ವಿಧಿಸಲಾಗುತ್ತದೆ. |
| ಈ. | ಹೆಚ್.ಎಸ್.ಆರ್.ಪಿ ನಂಬರ್ ಪ್ಲೇಟ್ ಅಳವಡಿಸಲು ಹೆಚ್ಚುವರಿ ಹಣ ವಸೂಲು ಮಾಡಲಾಗುತ್ತಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಸ್ವೀಕೃತವಾಗಿದೆಯೇ; ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು? | ವಾಹನಗಳಿಗೆ ಹೆಚ್.ಎಸ್.ಆರ್.ಪಿ. ಅಳವಡಿಸುವ ಸಂಬಂಧ ಪಾರದರ್ಶಕತೆ ಮತ್ತು ಹೆಚ್ಚುವರಿ ಶುಲ್ಕ ವಿಧಿಸುವುದನ್ನು ತಡೆಗಟ್ಟಲು, OEM ಗಳ ಅಧಿಕೃತ HSRP ತಯಾರಕರು ಅಧಿಕೃತಗೊಳಿಸಿದ ಪೋರ್ಟಲ್ ಮೂಲಕ ವಾಹನದ ಮಾಲೀಕರು ಆನ್‌ಲೈನ್‌ನಲ್ಲಿ ಮಾತ್ರ ಶುಲ್ಕ ಪಾವತಿಸಿ, ಪ್ಲೇಟ್ ಅಳವಡಿಸಿಕೊಳ್ಳಲು ಅವರಿಗೆ ಅನುಕೂಲಕರವಾದ ಸ್ಥಳ ಮತ್ತು ದಿನಾಂಕವನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶವನ್ನು ಕಲ್ಪಿಸಲಾಗಿದೆ.<br><br>ಈ ಕುರಿತು ಪ್ರಸ್ತುತ ಯಾವುದೇ ದೂರು ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಕ್ರಮಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಉ. | ಹಳೇ ವಾಹನಗಳ ಆರ್.ಸಿ. ಮಾನ್ಯತೆ ಪರಿಶೀಲಿಸದೇ ಹೆಚ್.ಎಸ್.ಆರ್.ಪಿ ನೀಡಿದರೆ ಅಂತಹ ವಾಹನಗಳನ್ನು ಕಾನೂನುಬದ್ಧಗೊಳಿಸಿದಂತೆ ಆಗುವುದರಿಂದ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಇ-ವಾಹನ್ ಪೋರ್ಟಲ್ ನಲ್ಲಿ ಇರುವ ವಾಹನದ ವಿವರಗಳು ಹಾಗೂ HSRP ತಯಾರಕರು ಅಧಿಕೃತಗೊಳಿಸಿದ ಆನ್‌ಲೈನ್ ಪೋರ್ಟಲ್ ನಲ್ಲಿನ ವಾಹನದ ವಿವರಗಳೊಂದಿಗೆ ಪರಿಶೀಲನೆಯಾಗಿ ತಾಳೆಯಾದಲ್ಲಿ ಮಾತ್ರ HSRP ಅಳವಡಿಸಲು ಅನುಮತಿ ದೊರೆಯುತ್ತದೆ. ಆದ್ದರಿಂದ, ಆರ್.ಸಿ. ಮಾನ್ಯತೆ ಇಲ್ಲದ ವಾಹನಗಳಿಗೆ ಹೆಚ್.ಎಸ್.ಆರ್.ಪಿ. ನೀಡಿ ಕಾನೂನುಬದ್ಧಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಟಿಡಿ 02 ಟಿಡಿಕ್ಯೂ 2024**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.